**Akashvani : Bangalore**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.07.2024 / 18.40 hrs**

ಮುಖ್ಯಾಂಶಗಳು

**೧. ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯನ್ನಾಗಿ ಮರು ನಾಮಕರಣ ಮಾಡಲು ಸಂಪುಟ ಸಭೆ ಅನುಮೋದನೆ**

**೨. ರಾಜ್ಯದಲ್ಲಿ ತೀವ್ರಗೊಂಡ ಮಳೆ; ಬಾಧಿತಗೊಂಡ ಜನ-ಜೀವನ; ಹಲವೆಡೆ ಶಾಲಾ-ಕಾಲೇಜುಗಳಿಗೆ ರಜೆ**

**೩. ಕಾರ್ಗಿಲ್ ವಿಜಯದಿನಾಚರಣೆ; ಯೋಧರ ತ್ಯಾಗ-ಬಲಿದಾನ ಸ್ಮರಣೆ**

**೪. ಕ್ರೀಡಾಪ್ರೇಮಿಗಳನ್ನು ರಂಜಿಸಲಿರುವ ಪ್ಯಾರಿಸ್ ಒಲಿಂಪಿಕ್ಸ್ ಇಂದು ರಾತ್ರಿ ಉದ್ಘಾಟನೆ**

**<><*<><>*><>**

ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯನ್ನಾಗಿ ಮರು ನಾಮಕಾರಣಕ್ಕೆ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರ ಕೋರಿಕೆ ಮೇರೆಗೆ ರಾಮನಗರ ಜಿಲ್ಲೆಗೆ ಹೊಸ ನಾಮಕರಣ ಮಾಡಲಿದ್ದು, ರಾಮನಗರ ಜಿಲ್ಲಾ ಕೇಂದ್ರವಾಗಿಯೇ ಮುಂದುವರಿಯಲಿದ್ದು, ಈಗಿರುವ ತಾಲೂಕುಗಳೇ ಹೊಸ ಜಿಲ್ಲೆಯಲ್ಲೂ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು. ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಈ ತಿಂಗಳ ಅಂತ್ಯಕ್ಕೆ ಸೇವೆಯಿಂದ ನಿವೃತ್ತರಾಗಲಿದ್ದು, ನೂತನ ಮುಖ್ಯ ಕಾರ್ಯದರ್ಶಿಯನ್ನಾಗಿ ಶಾಲಿನಿ ರಜನೀಶ್ ನೇಮಿಸುವ ನಿರ್ಧಾರ ಮಾಡಲಾಗಿದೆ ಎಂದು ಸಚಿವರು ಹೇಳಿದರು.

**<><*<><>*><>**

ರಾಜ್ಯದಲ್ಲಿ ಮಳೆಯ ತೀವ್ರತೆ ಮುಂದುವರಿದಿದೆ. ಪ್ರಮುಖ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಜನ-ಜೀವನ ಬಾಧಿತಗೊಂಡಿವೆ. ಅನೇಕ ಕಡೆ ಅಂಗನವಾಡಿ ಕೇಂದ್ರಗಳು ಹಾಗೂ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಪ್ರವಾಹ ಪೀಡಿತ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಇಂದು ಭೇಟಿ ನೀಡಿ ಪರಿಶೀಲಿಸಿದರು. ಖಾನಾಪುರ ತಾಲೂಕಿನ ಕಾಡಂಚಿನ ೧೫ ಗ್ರಾಮಗಳನ್ನು ಪಟ್ಟಿ ಮಾಡಲಾಗಿದ್ದು ಸಾಧ್ಯವಾದಷ್ಟು ಬೇಗ ಅವರನ್ನು ಸ್ಥಳಾಂತರ ಮಾಡಲು ಕ್ರಮಕೈಗೊಳ್ಳಬೇಕು ಎಂದರು. ಮಹಾರಾಷ್ಟ್ರದ ಘಟ್ಟ ಪ್ರದೇಶ ಸೇರಿದಂತೆ ಅನೇಕ ಕಡೆಗಳಲ್ಲಿ ಮಳೆ ಆರ್ಭಟ ಮುಂದುವರಿದ ಪರಿಣಾಮ ಕೃಷ್ಣಾ ನದಿಗೆ ಒಳ ಹರಿವು ಹೆಚ್ಚಾಗಿದೆ. ಸದ್ಯ ಮಹಾರಾಷ್ಟ್ರದ ಕೊಯ್ನಾ ಜಲಾಶಯದಿಂದ ಸುಮಾರು ೧೦ ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮಾಹಿತಿ ನೀಡಿದ್ದಾರೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯಾಗುತ್ತಿದ್ದು, ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನ ಕಾವೇರಿ ನದಿ ಪಾತ್ರದ ತಗ್ಗು ಪ್ರದೇಶದಲ್ಲಿ ವಾಸಮಾಡುವ ಜನರು, ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಿಲ್ಲಾಡಳಿತ ಮನವಿ

ಮಾಡಿದೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದ್ದು, ಜಿಲ್ಲೆಯಲ್ಲಿ ಪ್ರವಾಹ ಭೀತಿ ಎದುರಾಗಿದೆ. ಜಲಾಶಯದ ೨೫ ಗೇಟ್‌ಗಳ ಮೂಲಕ ೨ ಲಕ್ಷಕ್ಕೂ ಹೆಚ್ಚು ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿದೆ, ಇದರಿಂದಾಗಿ ಅನೇಕ ಮರಗಳು ಉರುಳಿಬಿದ್ದು, ಕೆಲವು ಕಡೆ ಸಂಚಾರಕ್ಕೆ ತೊಂದರೆಯಾಗಿದೆ. ಶ್ರೀಮಂಗಲ-ಕುಟ್ಟ ರಾಜ್ಯ ಹೆದ್ದಾರಿಯಲ್ಲಿಯೂ ಮರ ಬಿದ್ದ ಪರಿಣಾಮ ಕೆಲ ಕಾಲ ರಸ್ತೆ ಸಂಚಾರ ವ್ಯತ್ಯಯವಾಗಿದೆ, ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ತಂತಿ ಮತ್ತು ಕಂಬಗಳ ಮೇಲೆ ಮರಗಳು ಬಿದ್ದ ಪರಿಣಾಮ  ವಿದ್ಯುತ್ ಸಂಪರ್ಕ ಕಡಿತಗೊಂಡಿದೆ, ಅನೇಕ ಮನೆಗಳಿಗೆ ಹಾನಿಯಾಗಿದೆ. ಹಾರಂಗಿ ಜಲಾಶಯದಲ್ಲಿ ಪ್ರಸ್ತುತ ೨ ಸಾವಿರದ ೮೫೫ ಅಡಿ ನೀರಿನ ಸಂಗ್ರಹವಿದ್ದು, ಜಲಾಶಯಕ್ಕೆ ೧೦ ಸಾವಿರ ಕ್ಯೂಸೆಕ್ ನೀರಿನ ಒಳಹರಿವಿದ್ದು, ಜಲಾಶಯದಿಂದ ನದಿಗೆ ೧೪ ಸಾವಿರ ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದೆ, ಮಳೆಯಿಂದಾಗಿ ಇಂದು ಕೂಡ ಜಿಲ್ಲೆಯ ಶಾಲಾ ಕಾಲೇಜುಗಳಿಗೆ ಜಿಲ್ಲಾಡಳಿತ ಮುಂಜಾಗ್ರತಾ ಕ್ರಮವಾಗಿ ರಜೆ ನೀಡಿದೆ. ಮಂಡ್ಯ ಜಿಲ್ಲೆಯ ಕೆಆರ್‌ಎಸ್ ಜಲಾಶಯ ಭರ್ತಿಯಾಗಿದ್ದು, ಜಲಾಶಯದಿಂದ ಒಂದು ಲಕ್ಷಕ್ಕೂ ಹೆಚ್ಚು ಕ್ಯೂಸೆಕ್ ನೀರು ಹರಿಬಿಡಲಾಗುತ್ತಿದ್ದು, ಕಾವೇರಿ ನದಿ ಉಕ್ಕಿ ಹರಿಯುತ್ತಿದೆ. ಶ್ರೀರಂಗಪಟ್ಟಣದ ರಂಗನತಿಟ್ಟು, ಪಕ್ಷಿಧಾಮ, ವೆಲ್ಲೆಸ್ಲಿ ಸೇತುವೆ, ನಿಮಿಷಾಂಭ ದೇಗುಲದ ಮುಂಭಾಗದ ಪ್ರದೇಶ  ಮುಳುಗಡೆಯಾಗಿದ್ದು, ಸುರಕ್ಷತೆಯ ದೃಷ್ಟಿಯಿಂದ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲೂಕಿನ ಮಳಗಿ ಸಮೀಪದ ಧರ್ಮಾ ಜಲಾಶಯ ಭರ್ತಿಯಾಗಿದ್ದು, ಜಲಾಶಯಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಹಾಸನ ಜಿಲ್ಲೆಯ ಹೇಮಾವತಿ ಜಲಾಶಯದಿಂದ ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಬಿಡುತ್ತಿರುವುದರಿಂದ ತಗ್ಗು ಪ್ರದೇಶದಲ್ಲಿ ವಾಸ ಮಾಡುವ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಹೇಮಾವತಿ ಜಲಾಶಯದ ಕಾರ್ಯಪಾಲಕ ಇಂಜಿನಿಯರ್ ಮನವಿ ಮಾಡಿದ್ದಾರೆ.  ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆ ಮತ್ತು ಬಿರುಗಾಳಿಯಿಂದ ಅನೇಕ ಮರಗಳು ಉರುಳಿಬಿದ್ದು, ಜನಜೀವನಕ್ಕೆ ತೊಂದರೆಯಾಗಿದೆ. ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ, ಕಳಸ ತಾಲೂಕಿನ ಅಂಗನವಾಡಿ ಕೇಂದ್ರಗಳು ಹಾಗೂ ಶಾಲೆಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಮಲೆನಾಡು ಭಾಗದಲ್ಲಿ ವ್ಯಾಪಕ ಮಳೆಯಿಂದ ಕಳಸಾ-ಹೊರಡಾನು ಸಂಪರ್ಕಿಸುವ ಹೆಬ್ಬಾಳೆ ಸೇತುವೆ ಮುಳುಗಡೆಯಾಗಿದೆ. ಜಿಲ್ಲೆಯ ಅನೇಕ ಕೆರೆಗಳು ತುಂಬಿ ಹರಿಯುತ್ತಿವೆ.

**<><*<><>*><>**

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಬಳಿಯ ಶಿರೂರು ಗುಡ್ಡ ಕುಸಿತ ದುರಂತದಲ್ಲಿ ಕಣ್ಮರೆಯಾದ ಕೇರಳದ ಲಾರಿಯ ಅವಶೇಷಗಳು ಗಂಗಾವಳಿ ನದಿಯ ಆಳದಲ್ಲಿ ಇರುವುದು ಪತ್ತೆಯಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಕಾರ್ಯಾಚರಣೆ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನೊಯ್ಡಾದಿಂದ ತರಲಾದ ಡ್ರೋನ್ ಆಧಾರಿತ ಶೋಧನ ಯಂತ್ರದ ಸಹಾಯದಿಂದ ತಜ್ಞರು ಲಾರಿಯನ್ನು ಪತ್ತೆ ಹಚ್ಚಿದ್ದಾರೆ. ನದಿ ಮೇಲ್ಭಾಗದಲ್ಲಿ ಹಾರಾಟ ನಡೆಸಿದ ಯಂತ್ರ ನಾಲ್ಕು ಕಡೆ ಲೋಹದ ವಸ್ತುಗಳಿರುವುದನ್ನು ಗುರುತಿಸಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**<><*<><>*><>**

ಕಾರ್ಗಿಲ್ ವಿಜಯ ದಿವಸದ ಅಂಗವಾಗಿ ಭಾರತೀಯ ಯೋಧರ ತ್ಯಾಗ-ಬಲಿದಾನ ಸ್ಮರಿಸಲಾಗುತ್ತಿದೆ. ಪ್ರಧಾನ ಸಮಾರಂಭ ಬೆಂಗಳೂರಿನಲ್ಲಿ ಜರುಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹುತಾತ್ಮ ಯೋಧರ ಸ್ಮಾರಕಕ್ಕೆ ಇಂದು ಗೌರವ ನಮನ ಸಲ್ಲಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾರ್ಗಿಲ್ ವಿಜಯ ದಿನವನ್ನು ಇಂದು ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಇಂದು ಕಾರ್ಗಿಲ್ ವಿಜಯೋತ್ಸವ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎನ್.ಸಿ.ಸಿ ನಿವೃತ್ತ ಅಧಿಕಾರಿ ಮೇಜರ್ ಎಸ್.ಮಹಾಬಲೇಶ್ವರ್ ಮಾತನಾಡಿ, ಕಾರ್ಗಿಲ್ ಯುದ್ಧ ಪ್ರತಿಯೊಬ್ಬ ಭಾರತೀಯ ಪ್ರತಿಯೊಬ್ಬ ಪ್ರಜೆಯ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಹೇಳಿದರು. ಕೊಡಗು ಜಿಲ್ಲೆಯಲ್ಲಿ ಕಾರ್ಗಿಲ್ ವಿಜಯ ದಿನಾಚರಣೆಯನ್ನು ಆಚರಿಸಲಾಯಿತು. ಮಡಿಕೇರಿಯಲ್ಲಿನ ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿರುವ ಅಮರ್ ಜವಾನ್ ಸ್ಮಾರಕ, ಮಡಿಕೇರಿಯ ಮುಖ್ಯ ರಸ್ತೆಯಲ್ಲಿರುವ ಯುದ್ಧ ಸ್ಮಾರಕಗಳಲ್ಲಿ ವಿವಿಧ ಸಂಸ್ಥೆಗಳು ಪುಷ್ಪ ನಮನ ಹಾಗೂ ಯೋಧರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಿದ್ದವು. ಇದರ ಅಂಗವಾಗಿ ರಕ್ತದಾನ ಶಿಬಿರ ನಡೆಯಿತು. ಮಾಜಿ ಸೈನಿಕರು ಸೇರಿದಂತೆ ನೂರಾರು ಜನರು ಮಳೆಯ ನಡುವೆಯೂ ಭಾಗಿಯಾಗಿ ಕಾರ್ಗಿಲ್ ಸಮರದಲ್ಲಿ ಹುತಾತ್ಮ ಯೋಧರ ಸೇವೆಯನ್ನು ಸ್ಮರಿಸಿದರು. ಮಡಿಕೇರಿ ರೋಟರಿ ವುಡ್ಸ್ ವತಿಯಿಂದ ನಾಲ್ವರು ಯೋಧರನ್ನು ಸನ್ಮಾನಿಸಲಾಯಿತು. ಮಾಜಿ ಯೋಧ ಜಿ,ಎಸ್ ರಾಜಾರಾಮ್, ಸನ್ಮಾನ ಸ್ವೀಕರಿಸಿ ಮಾತನಾಡಿ, ಪ್ರತಿಯೊಬ್ಬರು ಜೀವನದಲ್ಲಿ ಒಮ್ಮೆಯಾದರೂ ಕಾರ್ಗಿಲ್ ಪ್ರದೇಶಕ್ಕೆ ಭೇಟಿ ನೀಡಿ ಭಾರತೀಯ ಸೈನಿಕರ ತ್ಯಾಗಬಲಿದಾನ ಅರಿಯಬೇಕು ಎಂದರು.  ಚಿಕ್ಕಮಗಳೂರುನಲ್ಲಿ ಕಾರ್ಗಿಲ್ ವಿಜಯ ಜ್ಯೋತಿ ರಥಾ ಯಾತ್ರೆ ನಡೆಯಿತು. ನಿವೃತ ಯೋದರು, ಸಾರ್ವಜನಿಕರು ಪಾಲ್ಗೊಂಡಿದ್ದರು. ದಾವಣಗೆರೆಯಲ್ಲಿಂದು ವಿವಿಧ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಾಜಿ ಸೈನಿಕರು ನಗರದಲ್ಲಿ ಬೃಹತ್ ಮೆರವಣಿಗೆ ನಡೆಸಿ, ನಂತರ ಸೈನಿಕರ ಉದ್ಯಾನವನದಲ್ಲಿ ಹುತಾತ್ಮ ಯೋಧರಿಗೆ ಪುಷ್ಪ ನಮನ ಸಲ್ಲಿಸಿದರು. ಗದಗದಲ್ಲಿ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇಶಕ್ಕಾಗಿ ಹೋರಾಡಿ, ಹುತಾತ್ಮರಾದ ಯೋಧರಿಗೆ ನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**<><*<><>*><>**

ಮಹಾತ್ಮಾ ಗಾಂಧಿ ಎಐಸಿಸಿ ಅಧ್ಯಕ್ಷತೆ ವಹಿಸಿದ್ದ ೧೯೨೪ ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ೧೦೦ ವರ್ಷ ತುಂಬಿದ ನೆನಪಿಗಾಗಿ ರಾಜ್ಯದ ಹಲವೆಡೆ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.  ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾದಯಾತ್ರೆ ಪರಿಕಲ್ಪನೆ ಮಹಾತ್ಮಾ ಗಾಂಧಿ ಅವರ ಕೊಡುಗೆ. ಕಾಂಗ್ರೆಸ್ ಅಧ್ಯಕ್ಷರಾಗಿ ಅವರು ನೀಡಿದ ಕೊಡುಗೆಯನ್ನು ಪಕ್ಷ ಯಶಸ್ವಿಯಾಗಿ ನಿರ್ವಹಿಸಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ದೇಶಾದ್ಯಂತ ನಡೆದ ಭಾರತ್ ಜೋಡೋ ಹಾಗೂ ನ್ಯಾಯ ಯಾತ್ರೆ ಇದಕ್ಕೊಂದು ಉತ್ತಮ ಉದಾಹರಣೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

**<><*<><>*><>**

ಜಗತ್ತಿನ ಕ್ರೀಡಾಪ್ರೇಮಿಗಳನ್ನು ರಂಜಿಸಲಿರುವ ಪ್ಯಾರಿಸ್ ಒಲಿಂಪಿಕ್ಸ್‌ನ ಉದ್ಘಾಟನಾ ಸಮಾರಂಭ ಇಂದು ನಡೆಯಲಿದೆ. ಸೀನ್ ನದಿಯ ಮೇಲೆ ಇಂದು ಭಾರತೀಯ ಕಾಲಮಾನ ರಾತ್ರಿ ೧೧ ಗಂಟೆಗೆ

ಉದ್ಘಾಟನಾ ಸಮಾರಂಭ ಜರುಗಲಿದೆ. ಪರೇಡ್‌ನಲ್ಲಿ ಭಾರತದ ಧ್ವಜಧಾರಿಗಳಾದ ಶರತ್ ಕಮಲ್ ಮತ್ತು ಪಿ.ವಿ.ಸಿಂಧು ಭಾರತೀಯ ನಿಯೋಗದ ನೇತೃತ್ವ ಪ್ರತಿನಿಧಿಸಲಿದ್ದಾರೆ. ಒಲಿಂಪಿಕ್ಸ್‌ನಲ್ಲಿ ಭಾರತದ ೧೧೭ ಕ್ರೀಡಾಪಟುಗಳು ಭಾಗವಹಿಸಿದ್ದಾರೆ. ಈ ಪೈಕಿ ಕರ್ನಾಟಕದ ೯ ಕ್ರೀಡಾಳುಗಳು ಸ್ಪರ್ಧಿಸುತ್ತಿದ್ದಾರೆ. ದೇಶವನ್ನು ಪ್ರತಿನಿಧಿಸುತ್ತಿರುವ ಕ್ರೀಡಾಪಟುಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಶುಭ ಹಾರೈಸಿದ್ದಾರೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಒಟ್ಟಾರೆ ೨೦೬ ದೇಶಗಳ ೧೦ ಸಾವಿರದ ೫೦೦ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ. ಉದ್ಘಾಟನಾ ಸಮಾರಂಭಕ್ಕೂ ಮುನ್ನ ಕೆಲ ಪಂದ್ಯಗಳಿಗೆ ಚಾಲನೆ ನೀಡಿದ್ದು, ಬುಧವಾರವೇ ಫುಟ್‌ಬಾಲ್ ಮತ್ತು ರಗ್ಬಿ ಪಂದ್ಯಗಳು ಆರಂಭವಾಗಿದೆ. ಬಿಲ್ಲುಗಾರಿಕೆಯ ಶ್ರೇಯಾಂಕದ ಸುತ್ತಿನಲ್ಲಿ ಅಂಕಿತಾ ಭಕತ್, ಭಜನ್ ಕೌರ್ ಮತ್ತು ದೀಪಿಕಾ ಕುಮಾರಿ ಅವರನ್ನೊಳಗೊಂಡ ಭಾರತೀಯ ಮಹಿಳಾ ತಂಡ, ೧ ಸಾವಿರದ ೯೮೩ ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಗಳಿಸಿ, ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದೆ.

**<><*<><>*><>**

ನಾಳೆಯಿಂದ ಮೂರು ದಿನ ಇ-ಸ್ವತ್ತು ತಂತ್ರಾಂಶ ಸ್ಥಗಿತವಾಗುತ್ತಿದ್ದು, ಜನರ ಅನುಕೂಲಕ್ಕಾಗಿ ಹೊಸ ತಂತ್ರಾಂಶ ಅನುಷ್ಠಾನಗೊಳಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಕುರಿತು ಹೇಳಿಕೆ ನೀಡಿದ್ದು, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಪರಿಹರಿಸಲು ತಂತ್ರಾಂಶ ಕಾರ್ಯಾರಂಭಿಸಿದ ನಂತರ ಸೇವಾ ಅವಧಿಯನ್ನು ಆಗಸ್ಟ್ ೨ರವರೆಗೆ ಪ್ರತಿನಿತ್ಯ ೮ ಗಂಟೆವರೆಗೂ ವಿಸ್ತರಿಸಲಾಗುವುದು. ಸಾರ್ವಜನಿಕರು ಸಹಕರಿಸುವಂತೆ ಎಂದು ಮನವಿ ಮಾಡಿದ್ದಾರೆ.

**<><*<><>*><>**

ತಮ್ಮ ಕುಟುಂಬಕ್ಕೆ ಮೈಸೂರಿನ ಮುಡಾದಲ್ಲಿ ಬದಲಿ ನಿವೇಶನ ಹಂಚಿಕೆಯಲ್ಲಿ ಯಾವುದೇ ಲೋಪವಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಪ್ರತಿಪಕ್ಷಗಳು ಪುರಾವೆ ಆಧಾರವಿಲ್ಲದೇ, ತೇಜೋವಧೆ ಮಾಡುತ್ತಿವೆ ಎಂದು ದಾಖಲೆ ಸಮೇತ ವಿವರಿಸಿದರು.

**<><*<><>*><>**

**ಸಂಕ್ಷಿಪ್ತ ಸುದ್ದಿ**

೧. ವಾಲ್ಮೀಕಿ ನಿಗಮದ ಹಗರಣ ಹಾಗೂ ಮೈಸೂರಿನ ಮುಡಾ ಬದಲಿ ನಿವೇಶನ ಹಂಚಿಕೆ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕೆಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ಬಿಜೆಪಿಯ ಸಂಸದರು ನವದೆಹಲಿಯಲ್ಲಿ ಸಂಸತ್ ಭವನದ ಮುಂದೆ ಪ್ರತಿಭಟನೆ ನಡೆಸಿದರು.

೨. ಕೋಲಾರ ಗ್ರಾಮೀಣ ಭಾಗದಲ್ಲಿ ಸ್ವಚ್ಚತೆಗೆ ಒತ್ತು ನೀಡಿ ಸಾಂಕ್ರಾಮಿಕ ರೋಗ ಮುಕ್ತ ವಾತಾವರಣ ನಿರ್ಮಿಸುವಲ್ಲಿ ಗ್ರಾಮ ಪಂಚಾಯಿತಿಗಳು ಇನ್ನೂ ಹೆಚ್ಚಿನ ಜವಾಬ್ದಾರಿಯಿಂದ ಕೆಲಸ

ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಪದ್ಮ ಬಸವಂತಪ್ಪ ಕರೆ ನೀಡಿದ್ದಾರೆ.

೩. ಉಡುಪಿ ನಗರಸಭೆಯ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ನಗರಸಭೆಯ ವತಿಯಿಂದ ನಿರಂತರ ಕಾರ್ಯಾಚರಣೆ ನಡೆಯುತ್ತಿದ್ದು, ಕಾರ್ಖಾನೆಯಲ್ಲಿ ಸಂಗ್ರಹಿಸಲಾಗಿದ್ದ ೪೧೫ ಕೆ.ಜಿ ನಿಷೇಧಿತ ಪ್ಲಾಸ್ಟಿಕ್ ವಶಕ್ಕೆ ಪಡೆದು ಐದು ಸಾವಿರ ರೂಪಾಯಿ ದಂಡ ವಿಧಿಸಲಾಯಿತು.

೪. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳವನ್ನು ಗುರುತಿಸಿ ಅಪಘಾತಗಳನ್ನು ತಪ್ಪಿಸಲು ವೈಜ್ಞಾನಿಕವಾಗಿ ರೂಪುರೇಷೆ ಸಿದ್ಧಪಡಿಸಬೇಕು. ರಾಷ್ಟ್ರೀಯ ಹೆದ್ದಾರಿ ಹಾಗೂ ರಾಜ್ಯ ಹೆದ್ದಾರಿ ಮತ್ತು ಇತರೆ ಕಡೆಗಳಲ್ಲಿ ಅಪಘಾತಗಳು ಸಂಭವಿಸುತ್ತಿದ್ದು, ಇದರ ಅಂಕಿ ಅಂಶಗಳನ್ನು ಸಂಗ್ರಹಿಸಿ ಪದೇ ಪದೇ ಅಪಘಾತವಾಗಿದ್ದಲ್ಲಿ ಆ ಸ್ಥಳವನ್ನು ಜಂಟಿ ಅಧಿಕಾರಿಗಳ ತಂಡ ಸ್ಥಳ ಪರಿಶೀಲಿಸಿ, ವೈಜ್ಞಾನಿಕವಾಗಿ ವರದಿ ಸಿದ್ಧಪಡಿಸಿ ಅಪಘಾತ ವಲಯದಿಂದ ಮುಕ್ತವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೫. ಕೋಲಾರ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ ೧, ೨ಎ, ೩ಎ, ೩ಬಿ ಸಮುದಾಯಕ್ಕೆ ಸೇರಿದ ಕಾನೂನು ಪದವೀಧರರಿಂದ ನಾಲ್ಕು ವರ್ಷಗಳ ತರಬೇತಿಗಾಗಿ ಸೂಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಆಗಸ್ಟ್ ೨೩ ಕೊನೆಯ ದಿನ. ಹೆಚ್ಚಿನ ಮಾಹಿತಾಗಿ ದೂರವಾಣಿ ಸಂಖ್ಯೆ ೦೮೧೫೨-೨೨೨೩೩೬ ಅನ್ನು ಸಂಪರ್ಕಿಸಬಹುದು.

೬. ವಿಜಯನಗರ ಜಿಲ್ಲೆಯಲ್ಲಿಂದು ಶಾಲೆ ಬಿಟ್ಟ ಮಕ್ಕಳ ಸಮೀಕ್ಷೆ ಕುರಿತು ತಾಲೂಕಿನಲ್ಲಿ ಆಯ್ಕೆಯಾದ ಸ್ವ-ಸಾಹಾಯ ಸಂಘದ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ ಒಂದು ದಿನದ ಕಾರ್ಯಾಗಾರ ಆಯೋಜಿಸಲಾಗಿತ್ತು.

೭. ಡೆಂಘೀ ಪ್ರಕರಣಗಳು ಕಾಣಿಸಿಕೊಂಡಿರುವ ಮದ್ದೇರು, ಮುದ್ದಾಪುರ ಗ್ರಾಮಪಂಚಾಯಿತಿಯ ಕೆಲವು ಹಳ್ಳಿಗಳಗೆ ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್ ಇಂದು ಭೇಟಿ ನೀಡಿ ಪರಿಶೀಲಿಸಿದರು.

**<><*<><>*><>**

ಇನ್ನು ಹವಾವರ್ತಾಮಾನ...

ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕಾಗಿತ್ತು. ಹಲವೆಡೆ ಮಳೆಯಾಗಿದೆ. ಭಾಗಮಂಡಲ ೧೮, ಆಗುಂಬೆ ೧೬, ಕ್ಯಾಸಲ್‌ರಾಕ್ ೧೫, ಕೊಟ್ಟಿಗೆಹಾರ ೧೪, ನಾಪೋಕ್ಲು ೧೩, ಸೋಮವಾರಪೇಟೆ ೧೨, ಕಳಸ ೧೧, ಯಲ್ಲಾಪುರ ೧೦, ಜೋಯಿಡಾ ೯, ಸಿದ್ದಾಪುರದಲ್ಲಿ ೮ ಸೆಂಟಿಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಒಂದುವಾರ ರಾಜ್ಯದ ಹಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ, ಗರಿಷ್ಠ ೨೭, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**